ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 18/07/2019

# ಸದನದಲ್ಲಿ ನಾನು ಅಂಪೈರ್ ಅಷ್ಟೆ

## ರಾಜೀನಾಮೆ ವಿಚಾರದಲ್ಲಿ ಕಾಲಹರಣ ಮಾಡಿಲ್ಲ ನನಗೆ ಅತೃಪ್ತರು ಯಾರೆಂದು ಗೊತ್ತಿಲ್ಲ: ಸ್ಪೀಕರ್

• **ಕನ್ನಡಪ್ರಭ ವಾರ್ತೆ** ಕೋಲಾರ 18/7/19

ಸುಪ್ರೀಂ ಕೋರ್ಟಿನ ತೀರ್ಪನ್ನು ಅತ್ಯಂತ ನಮ್ರತೆಯಿಂದ ಸ್ವೀಕರಿಸಿ, ಸಂವಿಧಾನದ ಆಶಯಗಳಿಗೆ ಬದ್ಧನಾಗಿ ವಿಧಾನಸೌಧಕ್ಕೆ ಹೋಗಿ ವಿಳಂಬವಿಲ್ಲದೆ ನನ್ನ ಕರ್ತವ್ಯ ನಿರ್ವಹಿಸುತ್ತೇನೆ ಎಂದು ವಿಧಾನಸಭಾ ಸ್ಪೀಕರ್ ಕೆ.ಆರ್.ರಮೇಶ್ ಕುಮಾರ್ ತಿಳಿಸಿದ್ದಾರೆ.



ಬುಧವಾರ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನ ನಂತರ ನಗರದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು ಸುಪ್ರೀಂ ಕೋರ್ಟ್ ಮಾರ್ಮಿಕವಾಗಿ ಹೇಳಿರುವುದನ್ನು ಗೌರವಿಸಿ ನಡೆದುಕೊಳ್ಳುವುದಾಗಿ ತಿಳಿಸಿದರು.

**ಶಾಸಕರನ್ನು ಸದನಕ್ಕೆ ಕರೆಸುವುದು ನನ್ನ ಹೊಣೆಯಲ್ಲ, ರಾಜಕೀಯ ಪಕ್ಷಗಳ ಜವಾಬ್ದಾರಿ**

ಸದನಕ್ಕೆ ಶಾಸಕರು ಬಾರದಿದ್ದಲ್ಲಿ ನಾನು ಹೊಣೆಯಲ್ಲ, ನನಗೆ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಶಾಸಕರಷ್ಟೇ ಗೊತ್ತು. ಅತೃಪ್ತರು ಯಾರೆಂದು ಗೊತ್ತಿಲ್ಲ. ಯಾರನ್ನೋ ತೃಪ್ತಿಪಡಿಸುವುದು ನನ್ನ ಕೆಲಸವಲ್ಲ. ಶಾಸಕರನ್ನು ಸದನಕ್ಕೆ ಕರೆಸುವುದು ನನ್ನ ಜವಾಬ್ದಾರಿಯಲ್ಲ. ಇದು ಪಕ್ಷಗಳ ಜವಾಬ್ದಾರಿ. ಸದನದಲ್ಲಿ ನಾನು ಅಂಪೈರ್ ಅಷ್ಟೇ ಎಂದು ಹೇಳಿದರು.

ಶಾಸಕರ ರಾಜೀನಾಮೆ ವಿಚಾರಕ್ಕೆ ಸಂಬಂಧಪಟ್ಟಂತೆ ಮಾತನಾಡಿದ ಅವರು, ನಾನು ಕಾಲಹರಣ ಮಾಡಿಲ್ಲ. ನನ್ನ ವ್ಯಾಪ್ತಿಯೊಳಗೆ ಆದಷ್ಟು ಬೇಗ ಕಾರ್ಯ ನಿರ್ವಹಿಸುವೆ. ಶಾಸಕರ ರಾಜೀನಾಮೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಬಂಧ ನ್ಯಾಯಾಲಯ ಕಾಲಮಿತಿ ನಿಗದಿಪಡಿಸಿಲ್ಲ. ಹೀಗಾಗಿ ನನ್ನ ಜವಾಬ್ದಾರಿ ಹೆಚ್ಚಿದೆ ಎಂದರು.

2